ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕಾರ್ಮಿಕರಿಗೆ ಲಾಕ್‌ಡೌನ್ ಸಂದರ್ಭದಲ್ಲಿ ಘೋಷಣೆ ಮಾಡಿದ ಸಹಾಯ ಧನ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) –

92 (25) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಾರ್ಮಿಕರಿಗೆ ಸರ್ಕಾರ ಲಾಕ್‌ಡೌನ್ ಸಂದರ್ಭದಲ್ಲಿ ಘೋಷಣೆ ಮಾಡಿದ ಸಹಾಯ ಧನವು ಇನ್ನೂ ಕೆಲವು ಕಾರ್ಮಿಕರಿಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದನ್ನು ಯಾವಾಗ ತಲುಪಿಸಲಾಗುತ್ತದೆ;

(ಆ) ರಾಜ್ಯದಲ್ಲಿ ಕಾರ್ಮಿಕ ಇಲಾಖೆಯಿಂದ ಲಾಕ್‌ಡೌನ್ ಸಂದರ್ಭದಲ್ಲಿ ನೀಡಿದ ಕಾರ್ಮಿಕ ಕಿಟ್‌ಗಳ ಸಂಖ್ಯೆ ಎಷ್ಟು; ಇದಕ್ಕಾಗಿ ಸರ್ಕಾರ ಎಷ್ಟು ಹಣ ವೆಚ್ಚ ಮಾಡಿದೆ; (ವಿವರ ನೀಡುವುದು)

(ಇ) ಕಾರ್ಮಿಕ ಇಲಾಖೆಗೆ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು; ಖರ್ಚಾದ ಹಣ ಎಷ್ಟು? (ಸಂಪೂರ್ಣ ವಿವರ ನೀಡುವುದು)